# ಮಂಗಳೂರು ವಿಶ್ವವಿದ್ಯಾನಿಲಯ

ಸಂ.ಮಂವಿ/ಸಾವಿ/ರಾಜ್ಯ ವಿ.ವೇತನ/2021–22/ಜಿ6

ಕುಲಸಚಿವರ ಕಛೇರಿ
ಮಂಗಳಗಂಗೋತ್ರಿ–574199
ದಿನಾಂಕ: 14.11.2022

**ಸುತ್ತೋಲೆ**

ವಿಷಯ: 2022-23ನೇ ಸಾಲಿನಲ್ಲಿ ಪೋಸ್ಟ್ ಮೆಟ್ರಿಕ್ ವಿದ್ಯಾರ್ಥಿ ವೇತನ ಯೋಜನೆಯನ್ನು State Scholarship Portal ನಲ್ಲಿ ಅಳವಡಿಸಿದ್ದು, ವಿಕಲಚೇತನ ವಿದ್ಯಾರ್ಥಿಗಳು ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸಲು ಅಗತ್ಯ ಕ್ರಮ ಕೈಗೊಳ್ಳುವ ಬಗ್ಗೆ.

ಉಲ್ಲೇಖ: ಜಿಲ್ಲಾ ಅಂಗವಿಕಲ ಕಲ್ಯಾಣಾಧಿಕಾರಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಉಡುಪಿ ಜಿಲ್ಲೆ, ಇವರ ಪತ್ರ ದಿನಾಂಕ 03.11.2022.

*****

2022-23ನೇ ಸಾಲಿನಲ್ಲಿ ರಾಜ್ಯ ಸರ್ಕಾರದ ವಿದ್ಯಾರ್ಥಿ ವೇತನ ಯೋಜನೆಯಡಿ ಎಸ್.ಎಸ್.ಎಲ್.ಸಿ. ನಂತರ (ಪೋಸ್ಟ್ ಮೆಟ್ರಿಕ್) ವ್ಯಾಸಂಗ ಮಾಡುತ್ತಿರುವ ವಿಕಲಚೇತನ ವಿದ್ಯಾರ್ಥಿಗಳಿಂದ ಅರ್ಜಿಗಳನ್ನು ಆನ್‌ಲೈನ್ ಮುಖಾಂತರ ಆಹ್ವಾನಿಸಲಾಗಿದ್ದು, ಅರ್ಹ ವಿದ್ಯಾರ್ಥಿಗಳು https://ssp.postmatric.karnataka.gov.in ಮುಖಾಂತರ ಅರ್ಜಿಗಳನ್ನು ಆನ್‌ಲೈನ್ ಮೂಲಕ ಸಲ್ಲಿಸುವ ಕುರಿತು, ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು, ಉಡುಪಿ ಜಿಲ್ಲೆ ಇವರ ಉಲ್ಲೇಖಿತ ಪತ್ರದಲ್ಲಿ ತಿಳಿಸಿದ್ದು, ಸದರಿ ಪತ್ರವನ್ನು ತಮ್ಮ ಕಾಲೇಜು/ವಿಭಾಗದ ಸೂಚನಾ ಫಲಕದಲ್ಲಿ ಪ್ರಕಟಿಸಿ, ಕಾಲೇಜು/ವಿಭಾಗದ ವಿಕಲಚೇತನ ವಿದ್ಯಾರ್ಥಿಗಳ ಗಮನಕ್ಕೆ ತಂದು ಸೂಕ್ತ ಕ್ರಮಕೈಗೊಳ್ಳುವಂತೆ ಈ ಮೂಲಕ ತಿಳಿಸಲಾಗಿದೆ. (ಉಲ್ಲೇಖಿತ ಪತ್ರದ ಪ್ರತಿ ಲಗತ್ತಿಸಿದೆ).

ಕುಲಸಚಿವರು

ರಿಗೆ,

1. ಎಲ್ಲಾ ಸ್ನಾತಕೋತ್ತರ ವಿಭಾಗಗಳ ಅಧ್ಯಕ್ಷರು /ಸಂಯೋಜಕರು, ಮಂಗಳೂರು ವಿಶ್ವವಿದ್ಯಾನಿಲಯ, ಮಂಗಳಗಂಗೋತ್ರಿ.
2. ನಿರ್ದೇಶಕರು (ಪ್ರಭಾರ), ಜ್ಞಾನಕಾವೇರಿ, ಸ್ನಾತಕೋತ್ತರ ಕೇಂದ್ರ, ಚಿಕ್ಕ ಅಳುವಾರ.
3. ಪ್ರಾಂಶುಪಾಲರು, ಮಂಗಳೂರು ವಿಶ್ವವಿದ್ಯಾನಿಲಯದ ಎಲ್ಲಾ ಘಟಕ/ಸಂಯೋಜಿತ/ ಸ್ವಾಯತ್ತ ಕಾಲೇಜುಗಳು.

ಪ್ರತಿ: 1) ಜಿಲ್ಲಾ ಅಂಗವಿಕಲ ಕಲ್ಯಾಣಾಧಿಕಾರಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಉಡುಪಿ ಜಿಲ್ಲೆ.
2) ನೋಡಲ್ ಅಧಿಕಾರಿ-ಎಸ್.ಎಸ್.ಪಿ. ಮಂಗಳೂರು ವಿಶ್ವವಿದ್ಯಾನಿಲಯ, ಮಂಗಳಗಂಗೋತ್ರಿ.
3) ಕುಲಸಚಿವರ ಆಪ್ತ ಸಹಾಯಕರು, ಮಂಗಳೂರು ವಿಶ್ವವಿದ್ಯಾನಿಲಯ, ಮಂಗಳಗಂಗೋತ್ರಿ.